# ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 330 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆ.

## ವಿಷಯ

ಸರ್ಕಾರಿ ಪದವಿ ಕಾಲೇಜು/ವಿಶ್ವವಿದ್ಯಾನಿಲಯಗಳಲ್ಲಿ ದೀರ್ಘಕಾಲದಿಂದ ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದು,ಇವರು ಯು.ಜಿ.ಸಿ.ನಿಯಮಾವಳಿಗಳ ಪ್ರಕಾರ ಶೈಕ್ಷಣಿಕ ವಿದ್ಯಾರ್ಹತೆ ಹೊಂದಿದ್ದು, ಸೇವಾ ಭದ್ರತೆ ಇಲ್ಲದೆ ಇರುವುದರಿಂದ ಇವರಿಗೆ ಮುಂದಿನ ನೇಮಕಾತಿ ಸಂದರ್ಭದಲ್ಲಿ ಆದ್ಯತೆ ಮೇರೆಗೆ ವಯೋಮಿತಿ ಸಡಿಲಿಕೆ ಹಾಗೂ ಕೃಪಾಂಕ (ವೇಟೇಜ್) ನೀಡುವ ಬಗ್ಗೆಹಾಗೂ ಗೌರವಧನ ಹೆಚ್ಚಳದ ಬಗ್ಗೆ ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

## ಸರ್ಕಾರದ ಉತ್ತರ

ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 91 ಡಿಸಿಇ 2004, ದಿನಾಂಕ:25.09.2009ರಲ್ಲಿ ಜಾರಿಗೊಳಿಸಿರುವ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಯು.ಜಿ.ಸಿ ನಿಯಮಾವಳಿಗಳಂತೆ ಶೇಕಡಾ 100 ರಷ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆದೇಶಿಸಲಾಗಿದೆ. ಅದರಂತೆ ಯು.ಜಿ.ಸಿ. ನಿಯಮಾವಳಿಗಳಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅತಿಥಿ ಉಪನ್ಯಾಸಕರಿಗೆ ವಯೋಮಿತಿ ಸಡಿಲಿಕೆ ಹಾಗೂ ಕೃಪಾಂಕ (ವೇಟೇಜ್) ನೀಡಲು ಅವಕಾಶವಿರುವುದಿಲ್ಲ.

2014ನೇ ಸಾಲಿನಲ್ಲಿ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಪ್ರಕ್ರಿಯೆಯಲ್ಲಿ ಒಟ್ಟು 2160 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ನೇರ ನೇಮಕಾತಿಯಿಂದ ಭರ್ತಿ ಮಾಡಲು ರೂಪಿಸಲಾಗಿದ್ದ ವಿಶೇಷ ನೇಮಕಾತಿ ನಿಯಮಗಳಲ್ಲಿ ಅತಿಥಿ ಉಪನ್ಯಾಸಕರಿಗೆ ವಯೋಮಿತಿ ಸಡಿಲಿಕೆ ಹಾಗೂ ಕೃಪಾಂಕ (ವೇಟೇಜ್) ನೀಡಿರುವುದಿಲ್ಲ.

ಅತಿಥಿ ಉಪನ್ಯಾಸಕರಿಗೆ ಸೇವಾ ಕೃಂಪಾಂಕ ನೀಡುವುದನ್ನು ಪ್ರಶ್ನಿಸಿ ಶ್ರೀ ಜಗನ್ನಾಥ್ ಮತ್ತು ಇತರರು ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ಸಲ್ಲಿಸಿದ್ದ ಅರ್ಜಿ ಸಂಖ್ಯೆ:953-959/2009, ದಿನಾಂಕ:19.08.2009 ರಂದು ನೀಡಿದ ತೀರ್ಪಿನಲ್ಲಿ ಅತಿಥಿ ಉಪನ್ಯಾಸಕರಿಗೆ ಕೃಪಾಂಕ ನೀಡುವುದು ನಿಯಮಬಾಹಿರವಾಗಿರುತ್ತದೆ ಎಂಬ ನಿಲುವನ್ನು ವ್ಯಕ್ತಪಡಿಸಿರುತ್ತದೆ. ಈ ತೀರ್ಪನ್ನು ಪ್ರಶ್ನಿಸಿ ಶ್ರೀ ಶಂಕರ ಲಮಾಣಿ ಮತ್ತು ಇತರರು ಮಾನ್ಯ ಉಚ್ಚ ನ್ಯಾಯಲಯದಲ್ಲಿ ರಿಟ್ ಅರ್ಜಿ ಸಂಖ್ಯೆ:26902-206914/2009 (ಎಸ್-ಕೆಎಟಿ) ಸಲ್ಲಿಸಿದ್ದು, ಸದರಿ ರಿಟ್ ಅರ್ಜಿಗಳ ಮೇಲೆ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ:08.07.2013 ರಂದು ನೀಡಿರುವ ತೀರ್ಪಿನಲ್ಲಿ ಮಾನ್ಯ ಕೆ.ಎ.ಟಿ.ಯು ನೀಡಿರುವ ತೀರ್ಪನ್ನು ಪುನರುಚ್ಚರಿಸಿರುತ್ತದೆ. ಈ ತೀರ್ಪನ್ನು ಪ್ರಶ್ನಿಸಿ, ಶ್ರೀ ಶಂಕರ ಲಮಾಣಿ ಮತ್ತು ಇತರರು ಮಾನ್ಯ ಸರ್ವೋಚ್ಚ ನ್ಯಾಯಲಯದಲ್ಲಿ ಎಸ್‌ಎಲ್‌ಪಿ ಯನ್ನು ಸಲ್ಲಿಸಿದ್ದು, ಸದರಿ ಪ್ರಕರಣ ನ್ಯಾಯಾಲಯದಲ್ಲಿ ಬಾಕಿ ಇರುತ್ತದೆ.

ಸರ್ಕಾರವು ಪತ್ರ ಸಂಖ್ಯೆ:ಇಡಿ/185/ಡಿಸಿಇ/2018,ದಿನಾಂಕ:03.08.2019ರಲ್ಲಿ ಒಟ್ಟು-1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿರುತ್ತದೆ. ಸದರಿ ಹುದ್ದೆಗಳನ್ನು ಭರ್ತಿ ಮಾಡಲು 2014ರ ವಿಶೇಷ ನೇಮಕಾತಿ ನಿಯಮಗಳನ್ನು ಆಧರಿಸಿ, ಸರ್ಕಾರವು ಅಧಿಸೂಚನೆ ಸಂಖ್ಯೆ:ಇಡಿ/257/ಡಿಸಿಇ/2019(ಭಾ-3), ದಿನಾಂಕ:08.07.2020 ರಲ್ಲಿ ಅಂತಿಮ ವಿಶೇಷ ನೇಮಕಾತಿ ನಿಯಮಗಳನ್ನು ಹೊರಡಿಸಲಾಗಿರುತ್ತದೆ.

ಯು.ಜಿ.ಸಿ. ನಿಯಮಾವಳಿಗಳ ಪ್ರಕಾರ ಶೈಕ್ಷಣಿಕ ವಿದ್ಯಾರ್ಹತೆ ಹೊಂದಿರುವ ಅತಿಥಿ ಉಪನ್ಯಾಸಕರುಗಳು ಕೂಡ ಮುಂದಿನ ನೇರ ನೇಮಕಾತಿ ಪ್ರಕ್ರಿಯೆಯಲ್ಲಿ ಇತರೆ ಅಭ್ಯರ್ಥಿಗಳಂತೆ ಅರ್ಜಿಯನ್ನು ಸಲ್ಲಿಸಿ, ಮೆರಿಟ್ ಆಧಾರದ ಮೇಲೆ ಆಯ್ಕೆಯಾಗಬಹುದಾಗಿದೆ.

ಸರ್ಕಾರದ ಆದೇಶ ಸಂಖ್ಯೆ:ಇಡಿ/66/ಡಿಸಿಇ/2017, ದಿನಾಂಕ:04.04.2017 ರನ್ವಯ ಸ್ನಾತಕೋತ್ತರ ಪದವಿ ಪರೀಕ್ಷೆಯಲ್ಲಿ ಕನಿಷ್ಠ ಶೇ.55ರಷ್ಟು ಅಂಕಗಳನ್ನು ಪಡೆದು ಎನ್‌ಇಟಿ/ಎಸ್‌ಎಲ್‌ಇಟಿ ಅಥವಾ ಪಿ.ಹೆಚ್‌ಡಿ ಹೊಂದಿರುವ ಅತಿಥಿ ಉಪನ್ಯಾಸಕರಿಗೆ ಮಾಸಿಕ ಗೌರವಧನ ರೂ.13,000/- ಹಾಗೂ ಸ್ನಾತಕೋತ್ತರ ಪದವಿ ಪಡೆದ ಅತಿಥಿ ಉಪನ್ಯಾಸಕರಿಗೆ ರೂ.11,000/- ಗಳನ್ನು ಪಾವತಿಸಲಾಗುತ್ತಿದೆ.

ಪ್ರಸ್ತುತ ಪಾವತಿಸಲಾಗುತ್ತಿರುವ ಮಾಸಿಕ ಗೌರವಧನದ ಮೊತ್ತವನ್ನು ಪರಿಷ್ಕರಿಸುವ ಸಂಬಂಧ ಆರ್ಥಿಕ ಇಲಾಖೆಯು ಪ್ರಸ್ತುತ ರಾಜ್ಯದಲ್ಲಿ ತಲೆದೂರಿರುವ ಕೋವಿಡ್-19 ಹಿನ್ನೆಲೆಯಲ್ಲಿ ಉಂಟಾಗಿರುವ ಆರ್ಥಿಕ ಮುಗಟ್ಟಿನ ಹಾಗೂ ಈ ಸಂಬಂಧ ಇರುವ ಆರ್ಥಿಕ ನಿರ್ಬಂಧನೆಯ ಹಿನ್ನೆಲೆಯಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿರುವವರಿಗೆ ಗೌರವಧನ ಹೆಚ್ಚಿಸಲು ಸಾಧ್ಯವಿರುವುದಿಲ್ಲವೆಂದು ತಿಳಿಸಿರುತ್ತದೆ.

(ಡಾ॥ ಅಶ್ವಥ್ ನಾರಾಯಣ ಸಿ.ಎನ್.)
ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ
ಉನ್ನತ ಶಿಕ್ಷಣ ಸಚಿವರು

ಇಡಿ 161 ಡಿಸಿಇ 2020